77

ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ: ಸಿ.ಎಸ್1/ ಗ.ಶಾ/ಎಸ್.ಎಸ್.ಎಲ್.ಸಿ/ಆ.ಅಂ.ನಮೂದು/01/2023-24 ದಿನಾಂಕ: 26-02-2024

**-ಸುತ್ತೋಲೆ -**

ವಿಷಯ: 2024ರ ಎಸ್.ಎಸ್.ಎಲ್.ಸಿ. ಪರೀಕ್ಷೆ-1ಕ್ಕೆ ನೋಂದಣಿಯಾಗಿರುವ ಶಾಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡುವ ಬಗ್ಗೆ.

ಉಲ್ಲೇಖ:1 ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 19-02-2024

2 ಮಂಡಲಿಯ ಮಾರ್ಗಸೂಚಿ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿ/ ಮಾರ್ಚ್-24/14/2023-24 ದಿನಾಂಕ: 04-10-2023

********

ಉಲ್ಲೇಖ (1)ರನ್ವಯ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ವತಿಯಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯಸ್ಥರಿಗೆ ತಮ್ಮ ಶಾಲೆಯ 2024ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಬರೆಯಲಿರುವ ಶಾಲಾ ವಿದ್ಯಾರ್ಥಿಗಳ (CCERF) ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡಲು **ದಿನಾಂಕ: 20-02-2024** ರಿಂದ ಅವಕಾಶ ಕಲ್ಪಿಸಲಾಗಿದ್ದು **29-02-2024 ಅಂತಿಮ ದಿನಾಂಕವಾಗಿರುತ್ತದೆ.**

ಉಲ್ಲೇಖ (2)ರ ಮಾರ್ಗಸೂಚಿಯಲ್ಲಿ ವಿವರಿಸಿರುವಂತೆ, ಪ್ರತಿ ವಿದ್ಯಾರ್ಥಿಯು ಕನಿಷ್ಠ ಶೇಕಡಾ 75ರಷ್ಟು ಹಾಜರಾತಿಯನ್ನು ಹೊಂದಿರುವ ಬಗ್ಗೆ 'Yes' ಎಂದು Select ಮಾಡಲ್ಪಟ್ಟ ವಿದ್ಯಾರ್ಥಿಗಳಿಗೆ ಮಾತ್ರ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ಕಲ್ಪಿಸಲಾಗಿದೆ. 'No' ಎಂದು Select ಮಾಡಲ್ಪಟ್ಟ ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ನೀಡಿರುವುದಿಲ್ಲ. ಅಂದರೆ, ಆ ವಿದ್ಯಾರ್ಥಿಯು 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ-1, ಪರೀಕ್ಷೆ-2 ಮತ್ತು ಪರೀಕ್ಷೆ-3 ನ್ನು ಬರೆಯಲು ಅರ್ಹನಿರುವುದಿಲ್ಲ, 2024-25ನೇ ಸಾಲಿನಲ್ಲಿ ಶಾಲೆಗೆ ಮರುದಾಖಲಾಗಿ ಪರೀಕ್ಷೆ ತೆಗೆದುಕೊಳ್ಳುವುದು ಎಂದರ್ಥ.

ನಿಗದಿತ ಹಾಜರಾತಿ 'No' ಎಂದು Select ಮಾಡಲ್ಪಟ್ಟ ವಿದ್ಯಾರ್ಥಿಗಳ ಮಾಹಿತಿಯನ್ನು ಸಹ Save ಮಾಡಿ Freeze ಮಾಡುವುದು ಕಡ್ಡಾಯವಾಗಿರುತ್ತದೆ. ಈ ವಿದ್ಯಾರ್ಥಿಗಳ ನೋಂದಣಿಯನ್ನು ರದ್ದುಪಡಿಸಲಾಗುವುದು. ಸದರಿ ವಿದ್ಯಾರ್ಥಿಗಳಿಗೆ ಅಂತಿಮ ಪ್ರವೇಶ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ಪರೀಕ್ಷಾ ಕೇಂದ್ರದ ನಾಮಯಾದಿ ಪಟ್ಟಿಯಿಂದಲೂ ಕೈಬಿಡಲಾಗುವುದು.

**ಈ ರೀತಿ ಶೇಕಡಾ 75ರಷ್ಟು ಹಾಜರಾತಿಯನ್ನು ಹೊಂದಿರದ ವಿದ್ಯಾರ್ಥಿಗಳ ಮಾಹಿತಿಯನ್ನು ಆಂತರಿಕ ಅಂಕಗಳ ತಂತ್ರಾಂಶದಲ್ಲಿ ನಮೂದಿಸಲು 29-02-2024 ಅಂತಿಮ ದಿನಾಂಕವಾಗಿದ್ದು, ನಂತರದ ದಿನಗಳಲ್ಲಿ ಈ ಬಗ್ಗೆ ಭೌತಿಕ ಅರ್ಜಿಗಳನ್ನು ಸಹ ಸ್ವೀಕರಿಸುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸಲಾಗಿದೆ.**

(ಗೋಪಾಲಕೃಷ್ಣ ಹೆಚ್.ಎನ್.) 26/2/2024
ನಿರ್ದೇಶಕರು (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಶಾಲಾ ಲಾಗಿನ್ ಮುಖಾಂತರ